# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 87
2. ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 13.02.2024
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡು ಸುಮಾರು ವರ್ಷವಾದರು ಅಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಕಾರ್ಮಿಕರಿಗೆ ವೇತನ ನೀಡದಿರಲು ಕಾರಣವೇನು; | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಈ ಕಾರ್ಖಾನೆಯು 2019-20, 2020-21, 2022-23 ಮತ್ತು 2023-24ನೇ ಹಂಗಾಮುಗಳಲ್ಲಿ ಕಾರ್ಯ ನಿರ್ವಹಣೆ ಮಾಡದೇ ಸ್ಥಗಿತಗೊಂಡಿರುತ್ತದೆ ಹಾಗೂ ಕಾರ್ಖಾನೆಯು ಆರ್ಥಿಕ ಸಂಕಷ್ಟಕ್ಕೆ ಗುರಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಿಬ್ಬಂದಿ ವರ್ಗ/ನೌಕರರಿಗೆ ಕಾರ್ಖಾನೆಯಿಂದ ವೇತನ ಪಾವತಿಸಲು ಸಾಧ್ಯವಾಗಿರುವುದಿಲ್ಲ. |
| (ಆ) | ಆ ಕಾರ್ಮಿಕರ ಹಕ್ಕಾದ ವೇತನ ಹಾಗೂ ಅವರ ಉದ್ಯೋಗಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಪುನಃ ಆ ಕಾರ್ಖಾನೆ ಪ್ರಾರಂಭ ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ; | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಯ ಸಾಲ ಮತ್ತು ಜವಾಬ್ದಾರಿಗಳನ್ನು ತೀರುವಳಿ ಮಾಡಲು ಹಾಗೂ ರೈತರ ಮತ್ತು ಕಾರ್ಮಿಕರ ಹಿತಾಸಕ್ತಿಯನ್ನು ಕಾಪಾಡುವ ಉದ್ದೇಶದಿಂದ ಕಾರ್ಖಾನೆಯ ಪ್ರಸ್ತಾವನೆಯಂತೆ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು ಬೀದರ್ ಜಿಲ್ಲೆ ಈ ಕಾರ್ಖಾನೆಯನ್ನು 2022-23ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ ಎಲ್.ಆರ್.ಓ.ಟಿ ಆಧಾರದ ಮೇಲೆ ಇದ್ದಲ್ಲಿ ಇದ್ದಂತೆಯೇ ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಆದೇಶ ಸಂಖ್ಯೆ: ಸಿಐ 107 ಸಿಓಎಫ್ 2022(ಭಾಗ-3), ದಿನಾಂಕ:10.01.2023 ರಲ್ಲಿ ಅನುಮತಿಯನ್ನು ನೀಡಲಾಗಿರುತ್ತದೆ. ಅದರಂತೆ ಕಾರ್ಖಾನೆಯ ವತಿಯಿಂದ ದಿನಾಂಕ:17.02.2023 ರಂದು ಟೆಂಡರ್ ಅಧಿಸೂಚನೆಯನ್ನು ಪ್ರಕಟಿಸಲಾಗಿರುತ್ತದೆ. ಆದರೆ, ಯಾವೊಬ್ಬ ಬಿಡ್ದುದಾರರು ಸಹ ಅರ್ಜಿಯನ್ನು ಸಲ್ಲಿಸಿರುವುದಿಲ್ಲ. ಈ ಹಿನ್ನೆಲೆಯಲ್ಲಿ ದಿನಾಂಕ:06.03.2023 ರಂದು ಮರು ಟೆಂಡರ್ ಪ್ರಕಟಣೆಯನ್ನು ಅಧಿಸೂಚಿಸಲಾಗಿರುತ್ತದೆ. ಆದಾಗ್ಯೂ ಯಾವೊಬ್ಬ ಬಿಡ್ದುದಾರರು ಸಹ ಅರ್ಜಿಯನ್ನು ಸಲ್ಲಿಸಿರುವುದಿಲ್ಲ.<br>ಮೇಲ್ಕಂಡ ಎರಡು ಟೆಂಡರ್ ಅಧಿಸೂಚನೆಗಳ ಸಂಬಂಧ ದಿನಾಂಕ:24.02.2023 ಮತ್ತು 09.03.2023 ರಂದು ಪ್ರಿ-ಬಿಡ್ ಸಭೆಗಳನ್ನು ನಡೆಸಲಾಗಿರುತ್ತದೆ. ಸದರಿ ಸಭೆಗಳಲ್ಲಿ ಭಾಗವಹಿಸಿದ ಆಸಕ್ತ ಬಿಡ್ದುದಾರರು ಟೆಂಡರ್ ಷರತ್ತುಗಳಲ್ಲಿ ಕೆಲವೊಂದು ತಿದ್ದುಪಡಿ ಮತ್ತು ಬದಲಾವಣೆಗಳನ್ನು ಮಾಡಲು ಹಾಗೂ ಸದರಿ ಕಾರ್ಖಾನೆಯು ಡಿಸಿಸಿ ಬ್ಯಾಂಕ್, ಅಪೆಕ್ಸ್ ಬ್ಯಾಂಕ್, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾಗಳಲ್ಲಿ ಹೊಂದಿರುವ ಸಾಲಗಳ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವಂತೆ ಕೋರಿದ್ದರು. ಸದರಿ ಪ್ರಸ್ತಾವನೆಯ ಕುರಿತು ಸರ್ಕಾರದ ಕಾರ್ಯದರ್ಶಿಗಳು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಎಂ.ಎಸ್.ಎಂ.ಇ ಮತ್ತು ಗಣಿ) ಇವರ ಅಧ್ಯಕ್ಷತೆಯಲ್ಲಿ ದಿನಾಂಕ:19.08.2023 ರಂದು ಸಭೆಯನ್ನು ಜರುಗಿಸಲಾಗಿರುತ್ತದೆ. ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆಗೆ ಸಾಲ ನೀಡಿರುವ ಬ್ಯಾಂಕುಗಳು ಅಂತಿಮವಾಗಿ ಎಷ್ಟು ಏಕ ತೀರುವಳಿ (ಓ.ಟಿ.ಎಸ್) ಮೊತ್ತಕ್ಕೆ ಒಪ್ಪುತ್ತವೆ ಎಂಬ ಬಗ್ಗೆ ಮಾಹಿತಿಯನ್ನು ಪಡೆದು ಪರಿಷ್ಕೃತ ಪ್ರಸ್ತಾವನೆ ಸಲ್ಲಿಸುವಂತೆ ಸದರಿ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ. |

| | | |
|---|---|---|
| | | ಅದರಂತೆ, ಸದರಿ ಬ್ಯಾಂಕ್‌ಗಳಿಂದ ಮಾಹಿತಿಯನ್ನು ಪಡೆದು ಸಲ್ಲಿಸುವಂತೆ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ದಿನಾಂಕ:27.10.2023 ಮತ್ತು 17.11.2023 ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಇವರಿಗೆ ತಿಳಿಸಲಾಗಿರುತ್ತದೆ. ಕಾರ್ಖಾನೆಯು ಮೇಲ್ಕಂಡ ಮೂರು ಬ್ಯಾಂಕುಗಳಿಂದ ಪಡೆದ ಸಾಲಗಳು (NPA) ಸುಸ್ತಿ ಆಗಿರುತ್ತವೆ. ಕಾರ್ಖಾನೆಗೆ ನೀಡಿರುವ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವಂತೆ ಬೀದರ್ ಡಿಸಿಸಿ ಬ್ಯಾಂಕಿಗೆ ಕಾರ್ಖಾನೆಯಿಂದ ಪತ್ರ ವ್ಯವಹಾರ ಮಾಡಲಾಗಿದ್ದು, ಬೀದರ್ ಡಿಸಿಸಿ ಬ್ಯಾಂಕಿನಿಂದ ಉತ್ತರವನ್ನು ನಿರೀಕ್ಷಿಸಲಾಗಿದೆ. |
| (ಇ) | ಈ ರೀತಿ ಕಾರ್ಮಿಕರಿಗೆ ತೊಂದರೆ ಮಾಡಿದ್ದಲ್ಲಿ, ಅದು ಕಾರ್ಮಿಕರ ಹಕ್ಕು ಉಲ್ಲಂಘನೆ ಮಾಡಿದಂತಾಗುವುದಿಲ್ಲವೇ? | ಈ ಕಾರ್ಖಾನೆಯ ಕಾರ್ಮಿಕರ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸಲು ಉದ್ದೇಶಿಸಲಾಗಿರುತ್ತದೆ. ಈ ಕಾರ್ಖಾನೆಯನ್ನು ಗುತ್ತಿಗೆ ಪಡೆಯುವ ಗುತ್ತಿಗೆದಾರರು ಪಾವತಿಸುವ ಗುತ್ತಿಗೆ ಮೊತ್ತದಿಂದ ಕಾರ್ಖಾನೆಯ ಕಾರ್ಮಿಕರ ವೇತನ ಮತ್ತು ಭತ್ಯೆಗಳನ್ನು ಪಾವತಿಸಲು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ:** ಸಿಐ 39 ಸಿಓಎಫ್ 2024

(ಶಿವಾನಂದ ಎಸ್. ಪಾಟೀಲ್)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು